# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 993
ಸದಸ್ಯರ ಹೆಸರು : ಡಾ: ಚಂದ್ರಶೇಖರ ಬಸವರಾಜ ಪಾಟೀಲ
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 20.08.2025

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು;</td><td rowspan="2">
ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ 2018-19ನೇ ಸಾಲಿನಿಂದ 2022-23ನೇ ಸಾಲಿನವರೆಗೆ ಯಾವುದೇ ನೇಮಕಾತಿಯಾಗಿರಲಿಲ್ಲ. ಆದರೆ ಪ್ರಸ್ತುತ ಜುಲೈ-2025ರ ಅಂತ್ಯಕ್ಕೆ 1619 ಚಾಲನಾ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲಾಗಿದೆ.<br><br>
ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಕಳೆದ ಐದು ವರ್ಷಗಳಲ್ಲಿ ವೃಂದವಾರು ಖಾಲಿ ಇರುವ ಹುದ್ದೆಗಳ ವಿವರಗಳು ಕೆಳಕಂಡಂತಿವೆ.
<table>
<tr><th>ವೃಂದ</th><th>2020-21</th><th>2021-22</th><th>2022-23</th><th>2023-24</th><th>2024-25</th></tr>
<tr><td>ದರ್ಜೆ-1 ಆಯ್ಕೆ ಶ್ರೇಣಿ</td><td>4</td><td>4</td><td>4</td><td>6</td><td>5</td></tr>
<tr><td>ದರ್ಜೆ-1 ಕಿರಿಯ</td><td>16</td><td>26</td><td>18</td><td>8</td><td>8</td></tr>
<tr><td>ದರ್ಜೆ-2 ಅಧಿಕಾರಿ ಗಳು</td><td>69</td><td>66</td><td>71</td><td>61</td><td>65</td></tr>
<tr><td>ದರ್ಜೆ-3 ಮೇಲ್ವಿಚಾರಕ</td><td>375</td><td>275</td><td>317</td><td>330</td><td>239</td></tr>
<tr><td>ದರ್ಜೆ-3 ಮೇಲ್ವಿಚಾರಕೇತರ</td><td>1637</td><td>2019</td><td>2486</td><td>1463</td><td>1871</td></tr>
<tr><td>ದರ್ಜೆ-4</td><td>23</td><td>16</td><td>25</td><td>7</td><td>13</td></tr>
<tr><td>ಒಟ್ಟು</td><td>2124</td><td>2406</td><td>2921</td><td>1875</td><td>2201</td></tr>
</table>
ಮುಂದುವರೆದು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಚಾಲಕ, ನಿರ್ವಾಹಕ ಹುದ್ದೆಗಳ ಭರ್ತಿಗೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ:-<br><br>
ಈಗಾಗಲೇ ಅನುಮತಿಸಿರುವ 300 ನಿರ್ವಾಹಕ ಹುದ್ದೆಗಳಿಗೆ ಸಾಮಾನ್ಯ ಸಾಮರ್ಥ್ಯ ಪರೀಕ್ಷೆ (CAT)ಯನ್ನು ಕೈಗೊಳ್ಳುವ ಮೂಲಕ ಭರ್ತಿಮಾಡಬೇಕಾಗಿದ್ದು, ಈ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪತ್ರ ಬರೆದು ನೇಮಕಾತಿ ಅಧಿಸೂಚನೆಯನ್ನು ಹೊರಡಿಸಿ, ಶೀಘ್ರವಾಗಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ಕೋರಲಾಗಿರುತ್ತದೆ ಹಾಗೂ 2023-24ನೇ ಸಾಲಿನಲ್ಲಿ 1773 ನಿರ್ವಾಹಕ ಹುದ್ದೆಗಳ ನೇರ ನೇಮಕಾತಿ ಕುರಿತ ಪ್ರಸ್ತಾವನೆಗೆ ಪ್ರಸ್ತುತ ಒಳಮೀಸಲಾತಿಗೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೆನೆನಿ 2024, ದಿನಾಂಕ:25.11.2024 ಮತ್ತು 29.3.2025 ರನ್ವಯ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೂ ಹೊರಡಿಸದಂತೆ ಆದೇಶಿಸಲಾಗಿದೆ. ಈ ಹಿನ್ನೆಲೆಯಲ್ಲಿ ಅನುಮತಿ ದೊರೆತ ನಂತರ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು.<br><br>
ಅಲ್ಲದೇ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಲ್ಲಿ 2023-24ನೇ ಸಾಲಿನಿಂದ ಜುಲೈ-2025ರವರೆಗೆ ಕ್ರಮವಾಗಿ 123 ಮತ್ತು 139 ಒಟ್ಟು 272 ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ.
</td></tr>
<tr><td>ಆ.</td><td>ಚಾಲಕ ನಿರ್ವಾಹಕ ಹುದ್ದೆಗಳ ಭರ್ತಿಗೆ ಸರ್ಕಾರ ಕಾಲ ಮಿತಿ ಹಾಕಿಕೊಂಡಿದೆಯೇ? (ವಿವರಿಸುವುದು)</td></tr>
</table>

ಸಂಖ್ಯೆ: ಟಿಡಿ 184 ಟಿಸಿಕ್ಯೂ 2025

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು